ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ಇತರೆ ಪರೀಕ್ಷೆಗಳು) ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ:ಎಸ್1/ವಾ.ಪ.ಫ.ಪ್ರ./ಜನವರಿ-2022/75/2021-22 ದಿನಾಂಕ: 11/04/2022

## ಸುತ್ತೋಲೆ

**ವಿಷಯ:** ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ವಿಷಯಗಳ ಫಲಿತಾಂಶ ಪ್ರಕಟಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಸಮಸಂಖ್ಯೆ ಪತ್ರ ದಿನಾಂಕ: 29/03/2022.

*******

ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ, ಪ್ರವೀಣದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರೌಢದರ್ಜೆ ವಿಷಯಗಳ ಫಲಿತಾಂಶವನ್ನು ಉಲ್ಲೇಖಿತ ಸುತ್ತೋಲೆಯಂತೆ ದಿನಾಂಕ: 29/03/2022ರಂದು ಪ್ರಕಟಿಸಲಾಗಿದೆ.

ವಾಣಿಜ್ಯ ಪರೀಕ್ಷೆಯ ಇನ್ನುಳಿದ ವಿಷಯಗಳಾದಕನ್ನಡ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಪ್ರಥಮ ಮತ್ತು ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ವಿಷಯಗಳ ಫಲಿತಾಂಶವನ್ನು ದಿನಾಂಕ: 13/04/2022ರಂದು ಮಂಡಳಿಯ ವೆಬ್‌ಸೈಟ್ www.sslc.karnataka.gov.in ನ ಇತರೆ ಪರೀಕ್ಷೆಗಳ ಪೋರ್ಟಲ್‌ನಲ್ಲಿ ಹಾಗೂ ವಾಣಿಜ್ಯ ಸಂಸ್ಥೆಗಳ ಶಾಲಾ ಲಾಗಿನ್‌ನಲ್ಲಿ 16/04/2022ರಂದು ಲಭ್ಯಮಾಡಲಾಗುವುದು. ಅದರಂತೆ ಎಲ್ಲಾ ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರು ಫಲಿತಾಂಶ ಪಟ್ಟಿಯನ್ನು ಸಂಸ್ಥೆಯ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ತಮ್ಮ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಫಲಿತಾಂಶದಲ್ಲಿ ತಿದ್ದುಪಡಿ ಇದ್ದಲ್ಲಿ ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸುವುದು. ಪ್ರಸ್ತಾವನೆಯನ್ನು ಪರಿಶೀಲಿಸಿ ನಿಯಮಾನುಸಾರ ಫಲಿತಾಂಶವನ್ನು ತಿದ್ದುಪಡಿ ಮಾಡಲು ಕ್ರಮವಹಿಸಲಾಗುವುದು. **ಫಲಿತಾಂಶವು ಪರೀಕ್ಷೆಯಲ್ಲಿ ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.**

ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಪ್ರಥಮ ಮತ್ತು ಮಧ್ಯಮ ದರ್ಜೆ, ಕನ್ನಡ/ಆಂಗ್ಲ ಬೆರಳಚ್ಚು ವಿಷಯಗಳ ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆಯ ವಿಷಯಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆ ವಿಷಯಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 18/04/2022 |
| ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆ ವಿಷಯಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 26/04/2022 |
| ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆ ವಿಷಯಗಳ ಉತ್ತರ ಪತ್ರಿಕೆಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 19/04/2022 |
| ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆ ಉತ್ತರ ಪತ್ರಿಕೆಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 28/04/2022 |

ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆ ಅಥವಾ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ ಮರುಎಣಿಕೆ/ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. ಇದಕ್ಕಾಗಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ www.sslc.karnataka.gov.in ಇಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಉತ್ತರ ಪತ್ರಿಕೆಗಳ ಛಾಯಾಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ವಿವರಗಳನ್ನು ಹಾಗೂ ಛಾಯಾಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಛಾಯಾಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 500/-ಗಳನ್ನು ಆನ್‌ಲೈನ್‌ನಲ್ಲಿಯೇ ಪಾವತಿಸಬೇಕಾಗಿರುತ್ತದೆ. ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಛಾಯಾಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಅಭ್ಯರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ಮಾಹಿತಿಯನ್ನು ರವಾನಿಸಲಾಗುವುದು. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮಂಡಳಿಯ ಜಾಲತಾಣವಾದ www.sslc.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಸಲ್ಲಿಸಬಹುದಾಗಿದೆ. ಅಂಕಗಳ ಮರುಎಣಿಕೆಗಾಗಿ ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 150/- ಅನ್ನು ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ. ಒಂದುವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ರವಾನಿಸಲಾಗುವುದು.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ಶುಲ್ಕ ರೂ. 800/- ಅನ್ನು ಪಾವತಿಸಬೇಕಿರುತ್ತದೆ. ಒಂದು ವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ರವಾನಿಸಲಾಗುವುದು. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ನಿಗಧಿತ ಶುಲ್ಕವನ್ನು ಅನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗಧಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NET BANKING ಮೂಲಕ ಶುಲ್ಕ ಪಾವತಿಸಬಹುದಾಗಿದೆ.

ಛಾಯಾಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಸಂಬಂಧ ಫ್ಲೋಚಾರ್ಟ್ ಅನ್ನು ಮಂಡಳಿಯ ಜಾಲತಾಣದಲ್ಲಿ ಲಭ್ಯಮಾಡಲಾಗಿದೆ.

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ. 500/- (ಐದು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ. 800/- (ಎಂಟು ನೂರು ರೂಪಾಯಿಗಳು) |
| ಉತ್ತರ ಪತ್ರಿಕೆಗಳ ಮರುಎಣಿಕೆ ಶುಲ್ಕ (ಒಂದು ವಿಷಯಕ್ಕೆ) | ರೂ.150/-(ನೂರ ಐವತ್ತು ರೂಪಾಯಿಗಳು) |

**ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು:**

ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ, ಪ್ರವೀಣ ದರ್ಜೆ ಹಾಗೂ ಕನ್ನಡ/ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಹಾಗೂ ಮುದ್ರಣ ವಿಷಯಗಳ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಆಯಾ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಸಂಬಂಧಿಸಿದ ಸಂಸ್ಥೆಯ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ. ಹಾಗೂ ಯಾವುದೇ ಕಾರಣಕ್ಕೂ ಮಂಡಳಿಯಿಂದ ಫಲಿತಾಂಶ ಪಟ್ಟಿಯನ್ನು ಭೌತಿಕವಾಗಿ ಸಂಸ್ಥೆಗಳಿಗೆ ಕಳುಹಿಸಲಾಗುವುದಿಲ್ಲ. ಆದ್ದರಿಂದ ತಮ್ಮ ವಾಣಿಜ್ಯ ಸಂಸ್ಥೆಯ ಲಾಗಿನ್‌ನಲ್ಲಿ ಪ್ರಕಟಿಸಲಾಗಿರುವ ಫಲಿತಾಂಶ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು ವಾಣಿಜ್ಯ ಸಂಸ್ಥೆಯಲ್ಲಿ ಖಾಯಂ ದಾಖಲೆಯಾಗಿ ಇಟ್ಟುಕೊಳ್ಳುವುದು.

1. ಜನವರಿ-2022ರ ವಾಣಿಜ್ಯ ಪರೀಕ್ಷೆಯ ಕನ್ನಡ ಶೀಘ್ರಲಿಪಿ ಪ್ರಥಮ ದರ್ಜೆ, ಆಂಗ್ಲ ಶೀಘ್ರಲಿಪಿ ಪ್ರಥಮ ಮತ್ತು ಮಧ್ಯಮ ದರ್ಜೆ, ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ ಹಾಗೂ ಮುದ್ರಣ ಪರೀಕ್ಷೆಯ ವಿಷಯಗಳಲ್ಲಿ ಪರೀಕ್ಷೆಗೆ ಹಾಜರಾದ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು.
2. ಒಂದು ವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.
3. ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) ಸಂಬಂಧಿಸಿದ ಸಂಸ್ಥೆಯ ಮುಖ್ಯಸ್ಥರು **ರೂ. 200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ NEFT Challan ಮೂಲ ಪ್ರತಿಯೊಂದಿಗೆ ಫಲಿತಾಂಶ ಪ್ರಕಟವಾದ 15 ದಿನಗಳೊಳಗಾಗಿ ಸಲ್ಲಿಸತಕ್ಕದ್ದು.
4. Non-KSEEB ಅಭ್ಯರ್ಥಿಯ ಫಲಿತಾಂಶ ಪಟ್ಟಿಯಲ್ಲಿ ತಿದ್ದುಪಡಿಗಳಿದ್ದಲ್ಲಿ ಅಗತ್ಯ ಪೂರಕ ದಾಖಲೆಗಳನ್ನು ದೃಢೀಕರಿಸಿ ಸಲ್ಲಿಸಲು ತಿಳಿಸಿದೆ.
5. ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

**ವಿಶೇಷ ಸೂಚನೆ:- ವಾಣಿಜ್ಯ ಸಂಸ್ಥೆಗಳಿಂದ ಪರೀಕ್ಷಾ ಮಂಡಳಿಗೆ ಪತ್ರ ವ್ಯವಹರಿಸುವ ಪ್ರತಿಯೊಂದು ಪತ್ರದ ಮುಖಪುಟದಲ್ಲಿ ತಮ್ಮ ಸಂಸ್ಥೆಗೆ ನೀಡಿರುವ ಶಾಲೆಯ ಸಂಕೇತ ಸಂಖ್ಯೆ, ದೂರವಾಣಿ ಸಂಖ್ಯೆ ಮತ್ತು E-Mail ID ಯನ್ನು ತಪ್ಪದೇ ನಮೂದಿಸುವುದು**

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ವಾಣಿಜ್ಯ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

(ಎಂ.ಆರ್.ಮಾರುತಿ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

ಪ್ರತಿಯನ್ನು:

1. ರಾಜ್ಯದ ಎಲ್ಲಾ ವಾಣಿಜ್ಯ ಶಾಲೆಗಳ ಪ್ರಾಚಾರ್ಯರುಗಳಿಗೆ ಮುಂದಿನ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ವಿಭಾಗೀಯ ಮಟ್ಟದ ಪ್ರಾದೇಶಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಗಳಿಗೆ ಕ್ರಮಕ್ಕಾಗಿ,
3. ನಿರ್ದೇಶಕರು(ಇತರೆ ಪರೀಕ್ಷೆಗಳು)/ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
4. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ,

5. ಕಛೇರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-01ರವರಿಗೆ ಮಾಹಿತಿಗಾಗಿ ಹಾಗೂ ಗೌರವಪೂರ್ವಕವಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01ರವರಿಗೆ ಮಾಹಿತಿಗಾಗಿ ಹಾಗೂ ಗೌರವಪೂರ್ವಕವಾಗಿ ಸಲ್ಲಿಸಿದೆ.